ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

(1)

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 23/12/20

## ಸಣ್ ಸುದ್ದಿ

# ನಮ್ಮಿಂದ ತಪ್ಪಾಗಿಲ್ಲ: ಮೇಲ್ಮನೆ ಕಾರ್ಯದರ್ಶಿ

ಕ.ಪ್ರ 23/12/20

ಬೆಂಗಳೂರು: ಡಿ.15ರಂದು ವಿಧಾನಪರಿಷತ್ ಕಲಾಪದ ವೇಳೆ ನಡೆದ ಗಲಾಟೆ ಪ್ರಕರಣದಲ್ಲಿ ತಮ್ಮಿಂದ ಯಾವುದೇ ತಪ್ಪಾಗಿಲ್ಲ ಎಂದು ವಿಧಾನ ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮಿ, ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿಗೆ ಸ್ಪಷ್ಟೀಕರಣ ನೀಡಿದ್ದಾರೆ. ಪ್ರಕರಣ ಸಂಬಂಧ ಸ್ಪಷ್ಟೀಕರಣ ನೀಡುವಂತೆ ಕೋರಿ ಸಭಾಪತಿ ನೀಡಿದ್ದ ನೋಟಿಸ್‌ಗೆ 3 ಪುಟಗಳ ಉತ್ತರ ನೀಡಿರುವ ಕಾರ್ಯದರ್ಶಿ, ಸಭಾಪತಿ ಅವರು ಸದನದ ಕಲಾಪದಲ್ಲಿ ಪಾಲ್ಗೊಳ್ಳಲು ಹಾಜರಿರುವಾಗ ಸಭಾಪತಿ ಪೀಠದಲ್ಲಿ ಉಪಸಭಾಪತಿ ಆಸೀನರಾಗಬೇಕೇ ಬೇಡವೇ ಎಂಬ ಬಗ್ಗೆ ಉಪಸಭಾಪತಿ ಅವರಿಗೆ ಜೆರಾಕ್ಸ್ ಪ್ರತಿ ಮೂಲಕ ಮಾಹಿತಿ ನೀಡಿದ್ದೇವೆ. ಸದನದಲ್ಲಿ ಗಲಾಟೆ ನಡೆದ ಸಂದರ್ಭದಲ್ಲಿ ವಿವಿಧ ಸಚಿವರು, ಹಿರಿಯ ಸದಸ್ಯರು ಹಾಜರಿದ್ದರು. ಈ ಸಂದರ್ಭದಲ್ಲಿ ನಮ್ಮಿಂದ ಯಾವುದೇ ಲೋಪಗಳಾಗಿಲ್ಲ ಎಂದಿದ್ದಾರೆ.